# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಹಿರಿಯೂರು

## ಸಿ.ಸಿ ಸಂಖ್ಯೆಃ 1208/2024

| | | | |
|---|---|---|---|
| ಸಾಕ್ಷಿದಾರರ ಹೆಸರು | – | ಟಿ. ದ್ಯಾಮಣ್ಣ | ಸಿಡಬ್ಲ್ಯೂ-6 |
| ತಂದೆಯ/ಗಂಡನ ಹೆಸರು | – | ತಿಪ್ಪೇಸ್ವಾಮಿ | ಪಿಡಬ್ಲ್ಯೂ-5 |
| ವಯಸ್ಸು | – | ಸು. 46 ವರ್ಷ | ಪ್ರ.ವ.ಬೋ<br>ದಿನಾಂಕಃ 01.08.2025 |
| ಉದ್ಯೋಗ | – | ಬಿಲ್ ಕಲೆಕ್ಟರ್, ನಗರಸಭೆ,<br>ಹಿರಿಯೂರು | |
| ವಾಸ | – | ಹಿರಿಯೂರು ನಗರ | |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿಯವರಿಂದಃ–**

1. ನಾನು 20 ವರ್ಷಗಳಿಂದ ನಗರಸಭೆ, ಹಿರಿಯೂರಿನಲ್ಲಿ ಬಿಲ್ ಕಲೆಕ್ಟರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ಸಾಕ್ಷಿಯು ನಿಪಿ-2 ರ ದಾಖಲೆಯಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ, ಸದರಿ ಸಹಿಯನ್ನು **ನಿಪಿ-2(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿಯು ನೋಟೀಸ್‌ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸದರಿ ನೋಟೀಸ್‌ನ್ನು **ನಿಪಿ-5** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-5(ಎ)** ಎಂದು ಗುರುತಿಸಲಾಯಿತು. ನಾನು ನಿಪಿ-2 ಮತ್ತು 5 ಕ್ಕೆ ಈಗ ಎರಡು ವರ್ಷಗಳ ಹಿಂದೆ ಹಿರಿಯೂರು ನಗರ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ. ಪೊಲೀಸ್‌ರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ. ಪಂಚನಾಮೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ–ಸವಾಲುಃ ಮಾನ್ಯ ಎಪಿಪಿಯವರಿಂದಃ–**

ದಿನಾಂಕಃ08.04.2024 ರಂದು ಹಿರಿಯೂರು ನಗರದ ಹೊಸ ನಗರಸಭೆ ಕಟ್ಟಡದ ಮುಂದೆ ಆವರಣದಲ್ಲಿ ಪಂಚನಾಮೆ ಜರುಗಿಸಲು ಸಹಕರಿಸುವಂತೆ ಕೋರಿ ಪೊಲೀಸ್‌ರು ನನಗೆ ನಿಪಿ–5 ರಂತೆ ನೋಟೀಸ್ ನೀಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ದಿನದಂದು ನಗರಸಭೆ ಆವರಣಕ್ಕೆ ಪೊಲೀಸ್‌ರು ಬಂದಿದ್ದು ನನ್ನ ಮತ್ತು ಚಾಸಾ–7 ರವರ ಸಮಕ್ಷಮ ಚಾಸಾ–1 ರವರು ತೋರಿಸಿಕೊಟ್ಟಂತೆ ನಿಪಿ–2 ರಂತೆ ಸ್ಥಳ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ–ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.